

# ಕೃತಕ ಬುದ್ಧಿಮತ್ತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಯಶಸ್ವಿ

ಸಾಗರ ಸಾಮ್ರಾಟ ಸಮಾಚಾರ

**ಹಳಿಯಾಳ:** ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದ ಕಂಪ್ಯೂಟರ್ ಸೈನ್ಸ್ ಎ ಐ ಆಂಡ್ ಎಂ ಎಲ್ ವಿಭಾಗದ ಪ್ರಾಧ್ಯಾಪಕ ನರಸಿಂಹ ದೀಕ್ಷಿತ್ ಶಾಲಾ ವಿದ್ಯಾರ್ಥಿಗಳಿಗೆ ಕೃತಕ ಬುದ್ಧಿಮತ್ತೆ ಕುರಿತಾಗಿ ಅರಿವು ಮೂಡಿಸಿದರು.

ಧಾರವಾಡದ ಸೋಮಾಪುರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಭಾರತೀ ವಿಶ್ವ ಸೇವಾ ಸದನ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ನರಸಿಂಹ ದೀಕ್ಷಿತ್ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ವಿದ್ಯಾರ್ಥಿಗಳು ತಮ್ಮ ಏಳಿಗೆಗೆ ಹೇಗೆ ಸಮರ್ಪಕವಾಗಿ ಬಳಸಿಕೊಳ್ಳಬಹುದೆಂದು ವಿವರಿಸಿದರು. ಚಾಟ್ ಜಿಪಿಟಿ ಇಂತಹ ತಂತ್ರಜ್ಞಾನವು ವಿದ್ಯಾರ್ಥಿಗಳ ಕಲಿಕೆಗೆ ಸಹಕಾರಿಯಾಗುತ್ತಿದೆ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಕೈಗಾರಿಕಾ ವಲಯದಲ್ಲಿ ಬಳಸುತ್ತಿರುವುದನ್ನು ಉದಾಹರಣೆ ಸಹಿತ ತಿಳಿಸಿದರು. ಪ್ರಾಥಮಿಕ ಮತ್ತುಪ್ರೌಢಶಾಲಾ ಮುಖ್ಯೋಪಾಧ್ಯಾಪಕರಾದ ಎ. ಹೆಚ್. ನದಾಫ್ ಮತ್ತು ಜಿ ಎಂ ನಿಡಗುಂದಿ, ವಿದ್ಯಾರ್ಥಿಗಳಿಗೆ ನೂತನ ತಂತ್ರಜ್ಞಾನವಾದ ಕೃತಕ ಬುದ್ಧಿಮತ್ತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದ ಮಹಾವಿದ್ಯಾಲಯಕ್ಕೆ ಆಭಾರಿಯಾಗಿದ್ದೇವೆ ಎಂದು ಹೇಳಿದರು. 150ಕ್ಕೂ ಅಧಿಕ ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ ಕುರಿತಾಗಿ ತಿಳಿದುಕೊಂಡರು. ಎ. ಐ. ಆಂಡ್ ಎಂ. ಎಲ್ ವಿಭಾಗದ ಮುಖ್ಯಸ್ಥೆ ಡಾ. ಪೂರ್ಣಿಮಾ ರಾಯ್ಕರ್ ಕಾರ್ಯಕ್ರಮ ಆಯೋಜಿಸಿದ್ದರು. ವಿದ್ಯಾರ್ಥಿಗಳಿಗೆ ತಂತ್ರಜ್ಞಾನ ಕ್ಷೇತ್ರದಲ್ಲಿನ ನೂತನ ಆಗುಹೋಗುಗಳ ಕುರಿತು